ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/27/ಎಸಿಎಂ(2)/2018-19

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು 560 001,
ದಿನಾಂಕ:04-08-2018.

-:: ಸು ತ್ತೋ ಲೆ ::-

**ವಿಷಯ:** 2018-19ನೇ ಸಾಲಿನಲ್ಲಿ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್ ವಿದ್ಯಾರ್ಥಿಗಳ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳಿಗೆ ವರ್ಗಾವಣೆ ಅವಧಿ ವಿಸ್ತರಿಸುವ ಬಗ್ಗೆ.

**ಉಲ್ಲೇಖ:** 1. ಈ ಕಛೇರಿ ಸಮ ಸಂಖ್ಯೆ ಸುತ್ತೋಲೆ ದಿ:05-07-2018.
2. ಹಲವು ಅಭ್ಯರ್ಥಿಗಳ ಮನವಿ.

-oooOooo-

2018-19ನೇ ಸಾಲಿನಲ್ಲಿ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳಿಗೆ ಪಾಲಿಟೆಕ್ನಿಕ್ ವರ್ಗಾವಣೆ ಸಂಬಂಧಿಸಿದಂತೆ ಅಂತಿಮ ದಿನಾಂಕ:28-07-2018 ಎಂದು ಉಲ್ಲೇಖ(1)ರಲ್ಲಿ ಸುತ್ತೋಲೆಯಲ್ಲಿ ನಿಗಧಿಪಡಿಸಲಾಗಿತ್ತು. ಮುಂದುವರೆದಂತೆ, ಅನೇಕ ವಿದ್ಯಾರ್ಥಿಗಳು ಮೇಲ್ಕಂಡಂತೆ ಅಂತಿಮ ದಿನಾಂಕದೊಳಗೆ ತಮ್ಮ ವೈಯಕ್ತಿಕ ಕಾರಣಗಳಿಂದಾಗಿ ವರ್ಗಾವಣೆ ಶುಲ್ಕ ಪಾವತಿಸದೇ ಇದ್ದು, ಅವಧಿ ವಿಸ್ತರಿಸಲು ಮನವಿ ಸಲ್ಲಿಸಿರುತ್ತಾರೆ.

ಪ್ರಯುಕ್ತ, ಪರಿಶೀಲಿಸಲಾಗಿ, ವಿದ್ಯಾರ್ಥಿಗಳ ಮತ್ತು ಸಾರ್ವಜನಿಕರ ಹಿತದೃಷ್ಟಿಯಿಂದ ಪರಿಗಣಿಸಿ 2018-19ನೇ ಸಾಲಿನ ಪಾಲಿಟೆಕ್ನಿಕ್ ವರ್ಗಾವಣೆ ಸಂಬಂಧ ಅಂತಿಮ ದಿನಾಂಕವನ್ನು ಈ ಕೆಳಕಂಡಂತೆ ವಿಸ್ತರಿಸಲಾಗಿದೆ.

1. **ವಿದ್ಯಾರ್ಥಿಗಳು ವರ್ಗಾವಣೆಗೆ ಸಂಬಂಧಿಸಿದಂತೆ, ದಿನಾಂಕ:08-08-2018 ರೊಳಗೆ ವರ್ಗಾವಣೆ ಶುಲ್ಕ ಪಾವತಿಸಿರತಕ್ಕದ್ದು.**
2. **ದಿ:08-08-2018 ರೊಳಗೆ ವರ್ಗಾವಣೆ ಶುಲ್ಕ ಪಾವತಿಸಿಕೊಂಡು ಪ್ರಿನ್ಸಿಪಾಲರು ನಿಯಮಾನುಸಾರ ತಮ್ಮ ಹಂತದಲ್ಲಿಯೇ ಮುಂದಿನ ಕ್ರಮ ಜರುಗಿಸುವುದು (ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ ಸಂಬಂಧಿಸಿದಂತೆ).**
3. **ದಿನಾಂಕ:10-08-2018 ರೊಳಗೆ ಅನುಮೋದನೆಗಾಗಿ ವರ್ಗಾವಣೆಗೆ ಸಂಬಂಧಪಟ್ಟ ಅರ್ಜಿಗಳನ್ನು ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು (ಖಾಸಗಿ ಪಾಲಿಟೆಕ್ನಿಕ್‌ಗಳಿಗೆ ಸಂಬಂಧಿಸಿದಂತೆ).**

ಮೇಲ್ಕಂಡ ಅವಧಿ ವಿಸ್ತರಣೆ ಹೊರತುಪಡಿಸಿ ಉಲ್ಲೇಖ(1)ರಲ್ಲಿನ ಸುತ್ತೋಲೆಯಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

ತಾಂತ್ರಿಕ ಪರೀಕ್ಷಾ ಮಂಡಳಿ ನಿಯಮಗಳನ್ವಯ ಹಾಜರಾತಿಯನ್ನು ಪೂರೈಸುವ ಷರತ್ತಿಗೊಳಪಟ್ಟು ಮೇಲ್ಕಂಡ ಅವಧಿಯಲ್ಲಿ ಸದರಿ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯವಾಗುವಂತೆ ಪ್ರವೇಶ ನೀಡತಕ್ಕದ್ದು.

ನಿರ್ದೇಶಕರು

04/08/18

ಇವರಿಗೆ,

*ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಮತ್ತು ಸೂಕ್ತ ಅನುಸರಣೆಗಾಗಿ.*

File 27-18(3rd & 5th Adm. Trans Govt &Aided)

-2-

<u>ಪ್ರತಿ</u> :-

1. ಕಾರ್ಯದರ್ಶಿಯವರು, ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿ. ಬೆಂಗಳೂರು
2. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
3. ನಿರ್ದೇಶಕರ ಮತ್ತು ಜಂಟಿ ನಿರ್ದೇಶಕರ ಆಪ್ತ ಶಾಖೆಗೆ.
4. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
5. ಸಂಯೋಜನಾಧಿಕಾರಿಗಳು, ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ. ಬೆಂಗಳೂರು - **ಸದರಿ ಸುತ್ತೋಲೆಯನ್ನು ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.**
6. ಆರ್‌ಡಿಎಂ ವಿಭಾಗಗಳಿಗೆ.
7. ಕಛೇರಿ ಪ್ರತಿ.